ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಷ್ಟ್ರೀಯ ಹೆದ್ದಾರಿ 169ರ ಗುರುಪುರ ಸೇತುವೆಯ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

594 (639) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಷ್ಟ್ರೀಯ ಹೆದ್ದಾರಿ 169ರ ಗುರುಪುರದಲ್ಲಿ ಪಾಲ್ಗುಣಿ ನದಿಗೆ ಅಡ್ಡಲಾಗಿ ಹೊಸ ಸೇತುವೆ ನಿರ್ಮಾಣ ಕಾಮಗಾರಿ ಎಂದು ಪೂರ್ಣಗೊಳ್ಳುವುದು ; ಇದಕ್ಕೆ ತಗಲುವ ವೆಚ್ಚ ಎಷ್ಟು; (ವಿವರ ನೀಡುವುದು)

(ಆ) ಸೇತುವೆಗೆ ಸಂಪರ್ಕ ರಸ್ತೆ ಕಲ್ಪಿಸಲು ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದೆಯೇ ; ಕಾಮಗಾರಿ ವಿಳಂಬಗೊಳ್ಳುವುದರಿಂದ ಜನಾಕ್ರೋಶ ಉಂಟಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಹೆದ್ದಾರಿ 169ರ ಗುರುಪುರ ಪಾಲ್ಗುಣಿ ನದಿಗೆ ಅಡ್ಡಲಾಗಿ ಪ್ರಸ್ತುತ ಇರುವ ಸೇತುವೆಯು ತೀರಾ ಅಪಾಯದಲ್ಲಿದ್ದು, ಹೊಸ ಸೇತುವೆ ನಿರ್ಮಾಣ ವಿಳಂಬಗೊಳ್ಳುತ್ತಿರುವುದನ್ನು ಸರ್ಕಾರ ಗಮನಿಸಿ ಕೂಡಲೇ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡುವುದೇ? (ವಿವರ ನೀಡುವುದು)